ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು

ಸಂ. ಗಣಕಶಾಖೆ/ಎಸ್.ಎಸ್.ಎಲ್.ಸಿ/ಮೌ.ಆ.ಪ್ರ/01/2018-19 ದಿನಾಂಕ: 25/03/2019

– ಸುತ್ತೋಲೆ –

**ವಿಷಯ:** ಏಪ್ರಿಲ್-2019 ಎಸ್.ಎಸ್.ಎಲ್.ಸಿ ಪರೀಕ್ಷೆಯ ಮೌಲ್ಯಮಾಪನ ಕಾರ್ಯ ನಿರ್ವಹಿಸಲು ಉಪ ಮುಖ್ಯ ಮೌಲ್ಯಮಾಪಕರ ಹಾಗೂ ಸಹಾಯಕ ಮೌಲ್ಯಮಾಪಕರ ಆದೇಶ ಪತ್ರಗಳನ್ನು ಶಾಲಾ ಹಂತದಲ್ಲಿ ಡೌನ್‌ಲೋಡ್ ಮಾಡಿಕೊಳ್ಳುವ ಬಗ್ಗೆ.

**ಉಲ್ಲೇಖ :** ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ದಿನಾಂಕ:20.08.2018 ರಂದು ನಡೆದ ಸಭಾ ನಡಾವಳಿಗಳು

*****

ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳ ಮುಖ್ಯಸ್ಥರು ತಮ್ಮ ಶಾಲೆಯ ಏಪ್ರಿಲ್ -2019ರ ಎಸ್.ಎಸ್.ಎಲ್.ಸಿ ಪರೀಕ್ಷೆಯ ಮೌಲ್ಯಮಾಪನ ಕಾರ್ಯ ನಿರ್ವಹಿಸಲು ಉಪ ಮುಖ್ಯ ಮೌಲ್ಯಮಾಪಕರ ಹಾಗೂ ಸಹಾಯಕ ಮೌಲ್ಯಮಾಪಕರನ್ನು ನೇಮಕ ಮಾಡಿರುವ ಆದೇಶ ಪತ್ರಗಳನ್ನು ಆನ್‌ಲೈನ್‌ನಲ್ಲಿ ಮಂಡಳಿಯ ಜಾಲತಾಣದ ಮೂಲಕ ಡೌನ್‌ಲೋಡ್ ಮಾಡಿಕೊಳ್ಳುವ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.

1. ಮಂಡಳಿಯ ಜಾಲತಾಣ http://www.kseeb.kar.nic.in ನಲ್ಲಿ ತಂತ್ರಾಂಶ ಲಭ್ಯವಿದೆ.
2. ಈಗಾಗಲೇ ಮೌಲ್ಯಮಾಪನದ ಕಾರ್ಯಕ್ಕೆ ಶಿಕ್ಷಕರ ಮಾಹಿತಿ ಅಪ್‌ಲೋಡ್, ಅಂತಿಮ ಪ್ರವೇಶ ಪತ್ರಗಳ ಡೌನ್‌ಲೋಡ್ ಹಾಗೂ ಆಂತರಿಕ ಅಂಕಗಳನ್ನು ಅಪ್‌ಡೇಟ್ ಮಾಡಿಕೊಂಡಿರುವ ಯೂಸರ್‌ನೇಮ್ ಹಾಗೂ ಪಾಸ್‌ವರ್ಡ್‌ನ್ನು ಬಳಿಸಿ ಮೌಲ್ಯಮಾಪಕರ ಆದೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳುವುದು.
3. ಲಾಗ್‌ಇನ್ ಆದ ನಂತರ Home Pageನಲ್ಲಿ Evaluators entry ಮೇಲೆ ಕ್ಲಿಕ್ ಮಾಡಿದಾಗ ಡ್ರಾಪ್ ಡೌನ್ ಮೆನುವಿನಲ್ಲಿ Download Evaluation Orders ಎಂಬ ಆಯ್ಕೆ ದೊರೆಯುತ್ತದೆ. ನಂತರ AEs Appointment Order ಹಾಗೂ DCs Appointment Order ಡೌನ್ ಲೋಡ್ ಮಾಡಿಕೊಳ್ಳಲು ಆಯ್ಕೆಗಳು ದೊರೆಯುತ್ತವೆ.
4. ಆಯಾ ಶಾಲೆಯ ಮುಖ್ಯಸ್ಥರು ತಮ್ಮ ಶಾಲೆಯ ಎಲ್ಲಾ ಶಿಕ್ಷಕರ ಮೌಲ್ಯಮಾಪನದ ನೇಮಕಾತಿ ಆದೇಶವನ್ನು ಡೌನ್‌ಲೋಡ್ ಮಾಡಿಕೊಂಡು ಪರಿಶೀಲಿಸಿ ಸಂಬಂಧಿಸಿದ ಶಿಕ್ಷಕರಿಗೆ ವಿತರಣೆ ಮಾಡಿ ಸ್ವೀಕೃತಿ ಪಡೆಯುವುದು.

ಮಂಡಳಿಯ ಜಾಲತಾಣದಲ್ಲಿ ಲಭ್ಯವಿರುವ ತಂತ್ರಾಂಶವನ್ನು ಬಳಸಿ ತಮ್ಮ ವ್ಯಾಪ್ತಿಯ ಎಲ್ಲಾ ಶಾಲೆಗಳ ಮುಖ್ಯಸ್ಥರು ಆಯಾ ಶಾಲೆಯ ಶಿಕ್ಷಕರ ಮೌಲ್ಯಮಾಪನದ ನೇಮಕಾತಿ ಆದೇಶವನ್ನು ಡೌನ್‌ಲೋಡ್ ಮಾಡಿಕೊಂಡು, ಪರಿಶೀಲಿಸಿ ಶಿಕ್ಷಕರಿಗೆ ವಿತರಿಸಿರುವುದನ್ನು ಕ್ಷೇತ್ರಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರು (ಆಡಳಿತ) ರವರು ಖಾತರಿಪಡಿಸಿಕೊಳ್ಳುವುದು.

(ಸುಮಂಗಲ. ವಿ)
ನಿರ್ದೇಶಕರು, ಪರೀಕ್ಷೆಗಳು

**ಅಗತ್ಯ ಕ್ರಮಕ್ಕಾಗಿ :**

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ